**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 'ಬಿ' ವರ್ಗದ ಕಲಬುರ್ಗಿ ನಗರಕ್ಕೆ ನಗರ ಪರಿಹಾರ ಭತ್ಯೆಯನ್ನು ನಿಗದಿಪಡಿಸುವ ಬಗ್ಗೆ

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ: ಆಇ 6 ಎಸ್‌ಆರ್‌ಪಿ 2015, ದಿನಾಂಕ:04.07.2015

ಪ್ರಸ್ತಾವನೆ:

ಮಾನ್ಯ ಮುಖ್ಯ ಮಂತ್ರಿಗಳು 2015-16 ರ ಆಯವ್ಯಯ ಭಾಷಣದಲ್ಲಿ ಮನೆ ಬಾಡಿಗೆ ಭತ್ಯೆಯ ಉದ್ದೇಶಕ್ಕಾಗಿ ರಾಜ್ಯದಲ್ಲಿನ ನಗರಗಳು ಹಾಗೂ ಗ್ರಾಮೀಣ ಪ್ರದೇಶಗಳನ್ನು 2011 ರ ಜನಗಣತಿಯ ಅಂಕಿ ಅಂಶಗಳ ಆಧಾರದ ಮೇಲೆ ಪುನಃ ವರ್ಗೀಕರಿಸುವ ಸರ್ಕಾರದ ನಿರ್ಧಾರವನ್ನು ಘೋಷಿಸಿದ್ದು ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ 04.07.2015 ರ ಸರ್ಕಾರಿ ಆದೇಶದಲ್ಲಿ ಮನೆ ಬಾಡಿಗೆ ಭತ್ಯೆ ಉದ್ದೇಶಕ್ಕಾಗಿ ಕಲಬುರ್ಗಿ ನಗರ ಪಾಲಿಕೆಯನ್ನು ಒಳಗೊಂಡಂತೆ ಕೆಲವು ನಗರಗಳನ್ನು 'ಬಿ' ಪ್ರವರ್ಗಕ್ಕೆ ಒಳಪಡಿಸಿರುತ್ತದೆ. ಮನೆ ಬಾಡಿಗೆ ಭತ್ಯೆ ಉದ್ದೇಶಕ್ಕಾಗಿ 'ಬಿ' ವರ್ಗದ ನಗರವಾಗಿ ಘೋಷಿಸಿರುವ ಕಲಬುರ್ಗಿ ನಗರ ಪಾಲಿಕೆಗೆ ನಗರ ಪರಿಹಾರ ಭತ್ಯೆ (CCA) ನೀಡುವಂತೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಮನವಿ ಮಾಡಿರುತ್ತದೆ. ಈ ಕೋರಿಕೆಯನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 07 ಎಸ್‌ಆರ್‌ಪಿ 2016,**
**ಬೆಂಗಳೂರು, ದಿನಾಂಕ: 10 ನೇ ಮಾರ್ಚ್ 2016**

ಕಲಬುರ್ಗಿ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ ಈ ಕೆಳಕಂಡಂತೆ ನಗರ ಪರಿಹಾರ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

| ನಗರ | ಸರ್ಕಾರಿ ನೌಕರರು ಸೇರಿದ ಗುಂಪು | ನಗರ ಪರಿಹಾರ ಭತ್ಯೆಯ ದರ ಮಾಸಿಕ |
|---|---|---|
| ಕಲಬುರ್ಗಿ ಮಹಾನಗರ ಪಾಲಿಕೆ | ಸಿ & ಡಿ<br>ಎ & ಬಿ | ರೂ.250<br>ರೂ.300 |

ಈ ಆದೇಶವು ದಿನಾಂಕ: 01.04.2016 ರಿಂದ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 500 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ ಜಿಲ್ಲೆಗಳ ಜಿಲ್ಲಾಧಿಕಾರಿಗಳು

3. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
4. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ ಬೆಂಗಳೂರು
6. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು
7. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ,ಬೆಂಗಳೂರು
8. ರಿಜಿಸ್ಟ್ರಾರ್, ಕರ್ನಾಟಕ ನ್ಯಾಯ ಮಂಡಳಿ, ಬೆಂಗಳೂರು
9. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
10. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು
12. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು
13. ಪ್ರಾಜೆಕ್ಟ್ ಆಫೀಸರ್, ಹೆಚ್.ಎಂ.ಆರ್.ಎಸ್. ಕೊಠಡಿ ಸಂಖ್ಯೆ:145ಎ, ಬಹುಮಹಡಿ ಕಟ್ಟಡ, ಬೆಂಗಳೂರು
14. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು
16. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ
17. ವಾರಪತ್ರ/ಶಾಖೆಯ ರಕ್ಷಾ ಕಡತ

**www.finance.kar.nic.in**